# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 534 |
| ಸದಸ್ಯರ ಹೆಸರು : | ಶ್ರೀ ಡಾ. ಎಂ.ಜಿ.ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 30.01.2026 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮೂಲಕ ಬೀದರ್ ಜಿಲ್ಲೆಯ ನಿರುದ್ಯೋಗಿ ಹಿಂದುಳಿದ ವರ್ಗಗಳ ಯುವಕರಿಗೆ ನೀಡಲಾಗುವ "ಸ್ವಯಂ ಉದ್ಯೋಗ ನೇರ ಸಾಲ" ಯೋಜನೆಯ ಗುರಿಯನ್ನು ಕಳೆದ ಮೂರು ವರ್ಷಗಳಿಂದ ಕಡಿಮೆ ಮಾಡುತ್ತಾ ಬರುತ್ತಿರುವುದು ನಿಜವೇ: | ಆಯಾ ವರ್ಷದ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕನುಗುಣವಾಗಿ ಕ್ರಿಯಾಯೋಜನೆ ರೂಪಿಸಿ ಜಿಲ್ಲಾವಾರು ಗುರಿ ನಿಗದಿಪಡಿಸಿ, ಅರ್ಹ ಫಲಾನುಭವಿಗಳಿಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ. ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಒದಗಿಸಿದಲ್ಲಿ ಹೆಚ್ಚು ಗುರಿ ನಿಗದಿಪಡಿಸಿ, ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತದೆ. |
| ಆ) | ಇದರಿಂದ ಜಿಲ್ಲೆಯ ಯುವ ಜನರಿಗಾಗುತ್ತಿರುವ ಹಿನ್ನಡೆಯನ್ನು ಸರಿಪಡಿಸಲು ಸರ್ಕಾರದ ನಿಲುವೇನು? | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಎಲ್ಲಾ ನಿಗಮಗಳಿಗೆ 2025-26ನೇ ಸಾಲಿನಲ್ಲಿ ಹೆಚ್ಚಿನ ಅನುದಾನವನ್ನು ಒದಗಿಸಿರುವುದರಿಂದ "ಸ್ವಯಂ ಉದ್ಯೋಗ ನೇರ ಸಾಲ" ಯೋಜನೆಯಡಿ ಹೆಚ್ಚಿನ ಗುರಿ ನಿಗದಿಪಡಿಸಿಕೊಂಡಿದ್ದು, ಸಮರ್ಪಕವಾಗಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. |

**ಸಂಖ್ಯೆ: ಹಿಂವಕ 106 ಬಿಂಎಂಎಸ್ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು